# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 240 (304) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಶಶೀಲ್ ಜಿ. ನಮೋಶಿ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 09.12.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ 15 ವರ್ಷಗಳಲ್ಲಿ ವಾಣಿಜ್ಯ ಹಾಗೂ ಕೈಗಾರಿಕಾ ಕ್ಷೇತ್ರದಲ್ಲಿ ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಪ್ರಗತಿಗಾಗಿ ಯಾವ ಯಾವ ಕೈಗಾರಿಕಾ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ; | ಕಳೆದ 15 ವರ್ಷಗಳಲ್ಲಿ ಕಲ್ಯಾಣ ಕರ್ನಾಟಕದ ಜಿಲ್ಲೆಗಳು ಸೇರಿದಂತೆ, ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಮತ್ತು ಹೊಸ ಕೈಗಾರಿಕೆಗಳನ್ನು ಆಕರ್ಷಿಸಲು ಕೈಗಾರಿಕಾ ನೀತಿ 2009-14, 2014-19, 2020-25 ಹಾಗೂ 2025-30 ಗಳನ್ನು ಜಾರಿಗೆ ತರಲಾಗಿದೆ. |
| ಆ | ಈ ಕೈಗಾರಿಕೆಗಳಲ್ಲಿ ಇಲ್ಲಿಯವರೆಗೆ ಎಷ್ಟು ಮೊತ್ತದ ಹೂಡಿಕೆಯನ್ನು ಮಾಡಲಾಗಿದೆ; (ಜಿಲ್ಲಾವಾರು ಕೈಗಾರಿಕೆಗಳ ಹೂಡಿಕೆಗಳ ಮಾಹಿತಿಯನ್ನು ನೀಡುವುದು) | 2013-14 ರಿಂದ ಅಕ್ಟೋಬರ್ - 2025ರ ಅಂತ್ಯದವರೆಗೆ ಕಲ್ಯಾಣ ಕರ್ನಾಟಕ ಜಿಲ್ಲೆಗಳ ವ್ಯಾಪ್ತಿಯಲ್ಲಿ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 426 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.2,34,340 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 1,31,862 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ.<br><br>ಇವುಗಳ ಪೈಕಿ 95 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ.76,416 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 52,748 ಸಂಖ್ಯೆಯ ಉದ್ಯೋಗ ಸೃಜನೆಯಾಗಿದೆ.<br><br>ಕೈಗಾರಿಕೆಗಳು ರಿಯಾಯಿತಿ ಹಾಗೂ ಉತ್ತೇಜನಗಳನ್ನು ಪಡೆಯಲು ಕೈಗಾರಿಕಾ ನೀತಿ ಅನ್ವಯ ಉದ್ಯೋಗಗಳನ್ನು ಸ್ಥಳೀಯರಿಗೆ ಒದಗಿಸ ಬೇಕಾಗಿರುತ್ತದೆ. ಹೂಡಿಕೆಗಳ ಸಂಬಂಧಿಸಿದ ಕೈಗಾರಿಕಾ ನೀತಿಯನ್ವಯ ಉದ್ಯೋಗ ನೀಡಿದರೆ, ಅರ್ಹ ರಿಯಾಯಿತಿ ಹಾಗೂ ಉತ್ತೇಜನಗಳನ್ನು ವಿಸ್ತರಿಸಲಾಗಿರುತ್ತದೆ. |
| ಇ | ಈ ಕೈಗಾರಿಕೆಗಳಲ್ಲಿ ಪ್ರಸ್ತುತ ಎಷ್ಟು ಉದ್ಯೋಗಗಳನ್ನು ಸೃಷ್ಟಿಸಲಾಗಿದೆ; ಉದ್ಯೋಗ ಹಂಚಿಕೆಯಲ್ಲಿ ಸ್ಥಳೀಯರನ್ನು ಪರಿಗಣಿಸುವಂತೆ ಇರುವ ಡಾ. ಸರೋಜಿನಿ ಮಹೀಷಿ ವರದಿಯನ್ನು ಪಾಲಿಸಲಾಗಿದೆಯೇ; ಪಾಲಿಸಿದ್ದಲ್ಲಿ ಶೇಕಡಾವಾರು ಉದ್ಯೋಗ ಹಂಚಿಕೆ ಮಾಹಿತಿ ಒದಗಿಸುವುದು. | |

| | | |
|---|---|---|
| ಈ | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಅನುಮೋದಿತ ಭವಿಷ್ಯಾತಿ ಕೈಗಾರಿಕಾ ಯೋಜನೆಗಳು ಯಾವುವು? | ಕಳೆದ 3 ವರ್ಷಗಳಲ್ಲಿ (2022-23 ರಿಂದ ಅಕ್ಟೋಬರ್ - 2025ರ ಅಂತ್ಯದವರೆಗೆ) ಕಲ್ಯಾಣ ಕರ್ನಾಟಕ ರಾಜ್ಯಗಳ ವ್ಯಾಪ್ತಿಯಲ್ಲಿ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 172 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.1,18,496 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 48570 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. |

ಸಿಐ 343 ಎಸ್‌ಪಿಐ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು